ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಭೂ ಮಾಫಿಯಾಗೆ ಕಡಿವಾಣ ಹಾಕುವ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

336 (407) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದ ಸುತ್ತಮುತ್ತ ಹಸಿರು ವಲಯದಲ್ಲಿರುವ ಜಮೀನುಗಳನ್ನು ಭೂಪರಿವರ್ತನೆ ಮಾಡದೆ ಬಡಾವಣೆಗಳಾಗಿ ಪರಿವರ್ತನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ;

(ಇ) ಈ ರೀತಿ ಅನಧಿಕೃತ ಬಡಾವಣೆಗಳನ್ನು ಮಾಡುವುದರಿಂದ ಸರ್ಕಾರಕ್ಕೆ ಆಗುವ ನಷ್ಟ ಎಷ್ಟು ;

(ಈ) ಭೂ ಪರಿವರ್ತನೆ ಆಗದೆ ಸಬ್ ರಿಜಿಸ್ಟ್ರಾರ್ ಕಛೇರಿಗಳಲ್ಲಿ ನಿವೇಶನಗಳನ್ನು ನೋಂದಣಿ ಮಾಡುತ್ತಿರುವವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ಈ ರೀತಿಯ ಅನಧಿಕೃತ ಬಡಾವಣೆಗಳನ್ನು ನಿರ್ಮಾಣ ಮಾಡುತ್ತಿರುವ ಭೂ ಮಾಫಿಯಾಗೆ ಕಡಿವಾಣ ಹಾಕಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ ?